सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

## ರಾಜ್ಯ ಚುನಾವಣಾ ಆಯೋಗದ ನಡವಳಿಗಳು

**ವಿಷಯ:** ಗ್ರಾಮ ಪಂಚಾಯಿತಿ ಸಾರ್ವತ್ರಿಕ/ಉಪ ಚುನಾವಣೆ ಜುಲೈ-2023, ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು ಮಡಂತ್ಯಾರು ಗ್ರಾಮ ಪಂಚಾಯಿತಿಯ 1 ಪಾರೆಂಕಿ ಕ್ಷೇತ್ರದ ಉಪ ಚುನಾವಣೆಯನ್ನು ತಡೆಹಿಡಿಯುವ ಬಗ್ಗೆ.

**ಓದಲಾಗಿದೆ:**
1. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ: 17: ಇಜಿಪಿ: 2023 ದಿನಾಂಕ: 03.07.2023.
2. ಮಾನ್ಯ ಬೆಳ್ತಂಗಡಿ ಹಿರಿಯ ಸಿವಿಲ್ ಜಡ್ಜ್ ನ್ಯಾಯಾಲಯದಲ್ಲಿ ದಾಖಲಾಗಿದ್ದ ಇಪಿ ಸಂಖ್ಯೆ: 02/2021ರ ಆದೇಶ ದಿನಾಂಕ: 01.04.2023.
3. ಜಿಲ್ಲಾಧಿಕಾರಿಯವರು ದಕ್ಷಿಣ ಕನ್ನಡ ಜಿಲ್ಲೆ ರವರ ಪತ್ರ ಸಂಖ್ಯೆ: ಇಎಲ್ಎನ್ (2) ಸಿಆರ್ 2/2023-24/ಜಿ2, ದಿನಾಂಕ: 23.06.2023.
4. ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು, ರವರ ಆದೇಶ ಸಂಖ್ಯೆ: WP: 14027/2023, ದಿನಾಂಕ: 05.07.2023.

**********

**ಪ್ರಸ್ತಾವನೆ:-**

ರಾಜ್ಯ ಚುನಾವಣಾ ಆಯೋಗವು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 308ಎಎ ಮತ್ತು 308ಎಬಿ ರನ್ವಯ ಹಾಗೂ ಕರ್ನಾಟಕ ಪಂಚಾಯತ್ ರಾಜ್ (ಚುನಾವಣೆ ನಡೆಸುವ) ನಿಯಮಗಳು, 1993ರ ನಿಯಮ 12 ರನ್ವಯ ಚುನಾವಣಾ ವೇಳಾಪಟ್ಟಿಯನ್ನು ಘೋಷಿಸಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಮಾನ್ಯ ಬೆಳ್ತಂಗಡಿ ಹಿರಿಯ ಸಿವಿಲ್ ಜಡ್ಜ್ ನ್ಯಾಯಾಲಯದ ಆದೇಶದಲ್ಲಿ, ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು ಮಡಂತ್ಯಾರು ಗ್ರಾಮ ಪಂಚಾಯಿತಿಯ 1 ಪಾರೆಂಕಿ ಕ್ಷೇತ್ರದ ಗೋಪಾಲಕೃಷ್ಣ.ಕೆ ಇವರ ಆಯ್ಕೆಯನ್ನು ಅಸಿಂಧುಗೊಳಿಸಿ ಹೊಸದಾಗಿ ಚುನಾವಣೆ ನಡೆಸಲು ಆದೇಶವಾಗಿರುವುದರಿಂದ ಸದರಿ ಸದಸ್ಯ ಸ್ಥಾನವು ಖಾಲಿ ಎಂದು ಜಿಲ್ಲಾಧಿಕಾರಿಗಳು ಉಲ್ಲೇಖ (3) ರಂತೆ ವರದಿ ನೀಡಿರುತ್ತಾರೆ. ಆದ್ದರಿಂದ ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಂತೆ, ಮಡಂತ್ಯಾರು ಗ್ರಾಮ ಪಂಚಾಯಿತಿಯ 1 ಪಾರೆಂಕಿ ಕ್ಷೇತ್ರದ ಉಪ ಚುನಾವಣೆ ಪ್ರಕ್ರಿಯೆಯು ದಿನಾಂಕ: 06.07.2023 ರಿಂದ ಪ್ರಾರಂಭವಾಗಿದ್ದು, ಯಾವುದೇ ನಾಮಪತ್ರಗಳು ಸಲ್ಲಿಕೆಯಾಗಿರುವುದಿಲ್ಲ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಪೀಠದ ಆದೇಶ ಸಂಖ್ಯೆ: WP: 14027/2023, ದಿನಾಂಕ: 05.07.2023ರ ಆದೇಶದಲ್ಲಿ, ಮಾನ್ಯ ಉಚ್ಚ ನ್ಯಾಯಾಲಯವು ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶಕ್ಕೆ ತಡೆಯಾಜ್ಞೆ ನೀಡಿ ಮಧ್ಯಂತರ ಆದೇಶ ಹೊರಡಿಸಿರುತ್ತದೆ.

ಮಾನ್ಯ ಉಚ್ಚ ನ್ಯಾಯಾಲಯವು ತಡೆಯಾಜ್ಞೆ ನೀಡಿರುವ ಆದೇಶವು ದಿನಾಂಕ: 07.07.2023 ರಂದು ಆಯೋಗದಲ್ಲಿ ಸ್ವೀಕೃತವಾದ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು ಮಡಂತ್ಯಾರು ಗ್ರಾಮ ಪಂಚಾಯಿತಿಯ 1 ಪಾರೆಂಕಿ ಕ್ಷೇತ್ರದ ಉಪ ಚುನಾವಣೆ ಪ್ರಕ್ರಿಯೆಯನ್ನು ಮುಂದುವರೆಸುವುದು ಸೂಕ್ತವಲ್ಲವೆಂದು ಆಯೋಗವು ಅಭಿಪ್ರಾಯಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ರಾಚುಆ:17: ಇಜಿಪಿ: 2023, ಬೆಂಗಳೂರು ದಿನಾಂಕ: 07.07.2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಂತೆ ಭಾರತ ಸಂವಿಧಾನದ ಅನುಚ್ಛೇದ 243K ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 308ರಲ್ಲಿ ಪ್ರದತ್ತವಾಗಿರುವ ಅಧಿಕಾರದ ಮೇರೆಗೆ, ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು ಮಡಂತ್ಯಾರು ಗ್ರಾಮ ಪಂಚಾಯಿತಿಯ 1 ಪಾರೆಂಕಿ ಕ್ಷೇತ್ರದ ಉಪ ಚುನಾವಣೆಯ ಮುಂದಿನ ಪ್ರಕ್ರಿಯೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ತಡೆಹಿಡಿಯಲಾಗಿದೆ.

ಮುಂದುವರೆದು, ಜಿಲ್ಲಾಧಿಕಾರಿಗಳು ಸದರಿ ಗ್ರಾಮ ಪಂಚಾಯಿತಿ ಕ್ಷೇತ್ರದ ಉಪ ಚುನಾವಣಾ ಪ್ರಕ್ರಿಯೆಯನ್ನು ಮುಂದುವರೆಸದಂತೆ ಹಾಗೂ ದಿನಾಂಕ: 07.07.2023 ರವರೆಗೆ ನಡೆದಿರುವ ಉಪ ಚುನಾವಣಾ ಪ್ರಕ್ರಿಯೆಗೆ ಸಂಬಂಧಪಟ್ಟ ದಾಖಲೆಗಳನ್ನು ಮುಂದಿನ ಆದೇಶದವರೆಗೆ ಜಿಲ್ಲಾ ಖಜಾನೆಯಲ್ಲಿ ಸಂರಕ್ಷಿಸಿಡುವಂತೆ ಸಂಬಂಧಪಟ್ಟ ಗ್ರಾಮ ಪಂಚಾಯಿತಿಯ ಚುನಾವಣಾಧಿಕಾರಿಗಳಿಗೆ ಸೂಕ್ತ ಸೂಚನೆಯನ್ನು ನೀಡಬೇಕೆಂದು ಮತ್ತು ಸದರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮತದಾರರಿಗೆ ಈ ಬಗ್ಗೆ ಸೂಕ್ತ ತಿಳುವಳಿಕೆಯನ್ನು ನೀಡಬೇಕೆಂದು ಆದೇಶಿಸಿದೆ.

ಆದೇಶಾನುಸಾರ

07/07/2023.

(ಪ್ರಕಾಶ್ ಮರಬಳ್ಳಿ)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.

ಇವರಿಗೆ,

1. ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ ದಕ್ಷಿಣ ಕನ್ನಡ ರವರಿಗೆ ಸೂಕ್ತ ಕ್ರಮಕ್ಕಾಗಿ
2. ತಹಶೀಲ್ದಾರರು, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ರವರಿಗೆ ಸೂಕ್ತ ಕ್ರಮಕ್ಕಾಗಿ
3. ಚುನಾವಣಾಧಿಕಾರಿಗಳು, ಮಡಂತ್ಯಾರು ಗ್ರಾಮ ಪಂಚಾಯಿತಿ, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ರವರಿಗೆ ಸೂಕ್ತ ಕ್ರಮಕ್ಕಾಗಿ.